# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:- 20-04-2021 ರಂದು ಬೆಳಗ್ಗೆ:-10.00 ಗಂಟೆಗೆ ವಾರ್ಡ್ ಸಂಖ್ಯೆ 125 ಮಾರೇನಹಳ್ಳಿ ವಾರ್ಡ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020-21/21-09-2020ರ ಆದೇಶದಂತೆ ನೋಡಲ್ ಅಧಿಕಾರಿಯನ್ನಾಗಿ ಶ್ರೀ. ಜಯಪ್ರಕಾಶ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗದವರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:-**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ. ಜಯಪ್ರಕಾಶ್, ಎ.ಇ.ಇ ಬೃಹತ್ ನೀರು ಕಾಲುವೆ | 9480683866 |
| 2 | ನವೀನ್ ಕುಮಾರ್ ಎಂ, ಸಹಾಯಕ ಅಭಿಯಂತರರು | 7899225559 |
| 3 | ಯೋಗೇಂದ್ರ, ಜಿ.ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು | 7411994937 |
| 4 | ರಾಹುಲ್ | 7026266677 |
| 5 | ಎಂ. ವೀರಪ್ಪ | 9444369278 |
| 6 | ಶಕೀಲಾಶೆಟ್ಟಿ | 9448249338 |

ದಿನಾಂಕ: 20-04-2021 ರಂದು ಬೆಳಿಗ್ಗೆ 10.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನು ನೀಡಿರುತ್ತಾರೆ. ಈ ಕುರಿತಂತೆ ಕೆಳಕಂಡ ವಿಷಯಗಳನ್ನು ಚರ್ಚಿಸಿ ಸಂಭದಪಟ್ಟ ಅಧಿಕಾರಿಗಳು ಕ್ರಮವಹಿಸಲು ಸೂಚಿಸಲಾಯಿತು.

- ಸಾರ್ವಜನಿಕರು ಎಲ್ಲೇಂದರಲ್ಲಿ ಕಸ ಹಾಕುವುದನ್ನು ತಡೆಯಲು ಹೆಚ್ಚು ಮಾರ್ಶಲ್‌ಗಳನ್ನು ನೇಮಿಸಿ ಬ್ಲಾಕ್ ಸ್ಪಾಟ ಪಾಯಿಂಟ್ ಆಗುವುದನ್ನು ತಡೆಯುವುದು ಹಾಗೂ ಕೆಲ ಬೀದಿಗಳಲ್ಲಿ ಕಸ ತೆಗೆಯುವರು ಬರುವುದಿಲ್ಲವೆಂದು ಮತ್ತು ಕಸಸಾಗಿಸುವ ಆಟೋಗಳಿಗೆ ಕಡ್ಡಾಯವಾಗಿ ಮೈಕ್ ಅಳವಡಿಸಿ ಸಾರ್ವಜನಿಕರಲ್ಲಿ ಕಸ ವಿಂಗಡನೆ ಬಗ್ಗೆ ಅರಿವು ಮೂಡಿಸ ಬೇಕೆಂದು ಸದಸ್ಯರು ಆಗ್ರಹಿಸಿರುತ್ತಾರೆ. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ,ವಾರ್ಡ ಸಭೆಗೆ ಗೈರು ಆಗುತ್ತಿರುವುದಕ್ಕೆ ಸದಸ್ಯರು ಅಸಮದಾನ ವ್ಯಕ್ತಪಡಿಸಿರುತ್ತಾರೆ.

  ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಪಶ್ಚಿಮ ವಲಯ

Scanned by CamScanner

- ನೋಡಲ್ ಅಧಿಕಾರಿಗಳು ಮಾಹಸನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಮಾಸ್ಕ್, ಸ್ಯಾನಿಟೈಸರ್ ಕಡ್ಡಾಯವಾಗಿ ಬಳಸಲು ಅರಿವು ಮೂಡಿಸಲು ಹಾಗೂ ತಪ್ಪಿದವರಿಗೆ ದಂಡ ವಿಧಿಸಲು ಸೂಚಿಸಿದರು.

  ಕ್ರಮ:- ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದರು.

- ಎಂ.ಸಿ. ಬಡಾವಣೆ, 13ನೇ ಮುಖ್ಯರಸ್ತೆ ಇಲ್ಲಿ ನಡೆಯುತ್ತಿರುವ ಚರಂಡಿ ಕಾಮಗಾರಿಯು ನಿದಾನವಾಗಿ ಪ್ರಗತಿಯಲ್ಲಿದೆ ಎಂದು ರಸ್ತೆ ನಿವಾಸಿಗಳು ದೂರು ನೀಡಿದ್ದು, ಸದರಿ ಕಾಮಗಾರಿಯನ್ನು ಕ್ಷಿಪ್ರವಾಗಿ ಪೂರ್ಣಗೊಳಿಸಲು ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.

  ಕ್ರಮ:- ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದರು.

ಈ ಮೇಲ್ಕಂಡ ಎಲ್ಲಾ ಸಮಸ್ಯೆಗಳನ್ನು ಮುಂದಿನ ಸಭೆಯೊಳಗೆ ನಿವಾರಣೆ ಮಾಡಿ ಅನುಪಾಲನಾ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ನೀಡಬೇಕಾಗಿ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರ,
ವಾರ್ಡ್ ನಂ.125, ಮಾರೇನಹಳ್ಳಿ, ಬಿಬಿಎಂಪಿ

**ಪ್ರತಿಯನ್ನು:-**

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
5) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
8) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

Scanned by CamScanner